ವಿದ್ಯುತ್ ಸಂಪರ್ಕರಹಿತ ಮನೆಗಳಿಗೆ ವಿದ್ಯುತ್ ಸಂಪರ್ಕವನ್ನು ಕೇಂದ್ರ ಸರಕಾರ ಜಾರಿಗೆ ತಂದಿರುವ ರಾಜೀವ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ಕಲ್ಪಿಸಲು ಕ್ರಮ ತೆಗೆದುಕೊಂಡಿದೆ.

ರಾಜೀವಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯನ್ನು, ಗ್ರಾಮೀಣ ಭಾಗದಲ್ಲಿ ವಿದ್ಯುತ್ ಸರಬರಾಜು ಕಲ್ಪಿಸುವ ಉದ್ದೇಶದಿಂದ ಕೇಂದ್ರ ಸರಕಾರ ಏಪ್ರಿಲ್–2005 ರಲ್ಲಿ ಜಾರಿಗೊಳಿಸಿತು. ಈ ಯೋಜನೆಯಡಿಯಲ್ಲಿ ಸೂಕ್ತ ಪ್ರಸ್ತಾವನೆಯನ್ನು ಗ್ರಾಮೀಣ ವಿದ್ಯುದೀಕರಣ ನಿಗಮ ನಿಯಮಿತದ ಮೂಲಕ, ಕೇಂದ್ರ ಸರಕಾರದ ಇಂಧನ ಮಂತ್ರಾಲಯದ ಅನುಮೋದನೆಗಾಗಿ ಸಲ್ಲಿಸಲಾಯಿತು.

ಗ್ರಾಮೀಣ ವಿದ್ಯುದೀಕರಣ ನಿಗಮ ನಿಯಮಿತದಿಂದ ಹಾವೇರಿ ಜಿಲ್ಲೆಯೂ ಸೇರಿದಂತೆ ಒಟ್ಟು 17 ಜಿಲ್ಲೆಗಳ ಕಾಮಗಾರಿಗಳಿಗೆ ಮಂಜೂರಾತಿ ದೊರೆತಿರುತ್ತದೆ.

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಹಾವೇರಿ ಜಿಲ್ಲೆಯ ಕಾಮಗಾರಿಗಳ ನಿರ್ವಹಣೆಗೆ ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಟರ್ನ್ ಕೀ ಆಧಾರದ ಮೇಲೆ ಗುತ್ತಿಗೆ ನೀಡಲಾಗಿದೆ. ಗುತ್ತಿಗೆದಾರರು ಕೆಲಸವನ್ನು ಈಗ ಆರಂಭಿಸಿದ್ದಾರೆ.

ಸದರಿ ಯೋಜನೆಯಡಿಯಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವ ತಾಲ್ಲೂಕಿನಲ್ಲಿ 2338 ಮತ್ತು ಸವಣೂರು ತಾಲ್ಲೂಕಿನಲ್ಲಿ 9820 ವಿದ್ಯುತ್ ರಹಿತ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಉದ್ದೇಶಿಸಲಾಗಿದೆ. ಇವುಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಕ್ರಮವಾಗಿ ಶಿಗ್ಗಾಂವ ತಾಲ್ಲೂಕಿನಲ್ಲಿ–1092 ಹಾಗೂ ಸವಣೂರ ತಾಲ್ಲೂಕಿನಲ್ಲಿ 6363 ಆಗಿರುತ್ತದೆ. ಇವಿಗಳನ್ನು ವಿದ್ಯುದೀಕರಣ ಕಾರ್ಯವನ್ನು ಡಿಸೆಂಬರ್–06 ರೊಳಗೆ ಪೂರ್ಣಗೊಳಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

270 (421) ಶ್ರೀ ಸಿಂಧೂರ ಜಿ.ರಾಜಶೇಖರ (ಶಿಗ್ಗಾಂವ್)

ಶ್ರೀ ಎನ್.ಚೆಲುವರಾಯಸ್ವಾಮಿ (ಮಾನ್ಯ ಸಾರಿಗೆ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಶಿಗ್ಗಾಂವ ತಾಲ್ಲೂಕು ತಡಸ ಹಾಗೂ ಬಂಕಾಪುರ ಬಸ್ ನಿಲ್ದಾಣಗಳ ಕಟ್ಟಡಗಳು ದುಸ್ಥಿತಿಯಲ್ಲಿರುವುದಲ್ಲದೆ ಕುಡಿಯುವ ನೀರು, ಶೌಚಾಲಯ, ಕಾಂಪೌಂಡು ಮುಂತಾದ ಮೂಲ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಬಂದಿದ್ದಲ್ಲಿ, ಈ ಸೌಲಭ್ಯಗಳನ್ನು ಸರ್ಕಾರ ಯಾವಾಗ ಕಲ್ಪಿಸುತ್ತದೆ;

ಇ. ಪ್ರಸಕ್ತ ಸಾಲಿನಲ್ಲಿ ಸರ್ಕಾರ ಕೇವಲ ಎರಡು ಬಸ್ಸುಗಳನ್ನು ಪೂರೈಸಿದ್ದು, ಇನ್ನುಳಿದ ಎಂಟು ಬಸ್ಸುಗಳನ್ನು ಪೂರೈಸಲಿಕ್ಕೆ ಸರಕಾರ ಯಾವಾಗ ಕ್ರಮ ಕೈಗೊಳ್ಳುತ್ತದೆ?

ಶ್ರೀ ಎನ್.ಚೆಲುವರಾಯಸ್ವಾಮಿ (ಮಾನ್ಯ ಸಾರಿಗೆ ಸಚಿವರು)

ಅ. ಹೌದು.

ಆ. ಈ ಸೌಲಭ್ಯವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಕೈಗೊಳ್ಳಲಾಗುವುದು.

ಇ. ಪ್ರಸಕ್ತ ಸಾಲಿನಲ್ಲಿ ಒದಗಿಸಲು ಯೋಜಿಸಲಾಗಿರುವ 10 ಹೊಸ ವಾಹನಗಳನ್ನು 2 ಹೊಸ ವಾಹನಗಳನ್ನು ಈಗಾಗಲೇ ಪೂರೈಸಲಾಗಿದೆ. ಇನ್ನುಳಿದ ವಾಹನಗಳನ್ನು 2006–07ನೇ ಸಾಲಿನಲ್ಲಿ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

271 (422) ಶ್ರೀ ಸಿಂಧೂರ ಜಿ.ರಾಜಶೇಖರ (ಶಿಗ್ಗಾಂವ್)

ಶ್ರೀ ಹನುಮಂತಪ್ಪ ವೈ.ಅಲ್ಕೋಡ್ (ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಸವಣೂರು ನಗರದಲ್ಲಿ ಸರಕಾರಿ ಆದೇಶ ಸಂಖ್ಯೆ: ವಾಪ್ರಯು 275/2001 ರಲ್ಲಿ ಕ್ರೀಡಾಂಗಣ ನಿರ್ಮಿಸಲು 56.28 ಲಕ್ಷ ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿದ್ದರೂ ಸಹ ಈವರೆಗೂ ಯಾವುದೇ ಪ್ರಗತಿಯನ್ನು ಕಾಣದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಶಿಗ್ಗಾಂವ ಪಟ್ಟಣದಲ್ಲಿ ಸರಕಾರಿ ಆದೇಶ ಸಂಖ್ಯೆ: ವಾಪ್ರಯು 115/1994ರ ಪ್ರಕಾರ ಕ್ರೀಡಾಂಗಣ ನಿರ್ಮಾಣ ವೆಚ್ಚ ರೂ.25.30 ಲಕ್ಷಗಳಿಗೆ ಸರಕಾರ ಆಡಳಿತಾತ್ಮಕ ಅನುಮೋದನೆ ನಿಡಿದ್ದರೂ ಸಹ ಈವರೆಗೂ ಯಾವುದೇ ಪ್ರಗತಿ ಕಾಣದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ. ಬಂದಿದ್ದಲ್ಲಿ, ಯಾವಾಗ ಪ್ರಾರಂಭಿಸಿ ಮುಗಿಸಲಾಗುವುದು;

ಈ. ಶಿಗ್ಗಾಂವ – ಸವಣೂರು ತಾಲ್ಲೂಕಿನಲ್ಲಿ ವ್ಯಾಯಾಮ ಶಾಲೆ (ಗರಡಿ ಮನೆ)ಗಳು ಎಷ್ಟು ಇವೆ;

ಉ. ಭಾರತದ ಪುರಾತನ ಕಾಲದಿಂದ ಕುಸ್ತಿಪಟುಗಳ ವ್ಯಾಯಾಮ ಶಾಲೆ (ಗರಡಿ ಮನೆ) ಗಳು ಇಂದು ಸಂಪೂರ್ಣ ನಶಿಸಿ ಹೋಗುವಂತಹ ಸ್ಥಿತಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;